(ಇಂದು ದಿನಾಂಕ 09-04-2026 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಂದುವರಿದ ಮುಖ್ಯ ವಿಚಾರಣೆಃ ಫಿರ್ಯಾದಿದಾರರ ಪರ ಶ್ರೀ ವಿ.ಜಿ.ಎ. ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ಅದನ್ನು ಓದಿ ತಿಳಿದುಕೊಂಡು ನಂತರ ಅದಕ್ಕೆ ನಾನು ಸಹಿ ಹಾಕಿರುತ್ತೇನೆ.

ಈ ಹಿಂದೆ ಖಾಸಗಿ ಫಿರ್ಯಾದಿಯೊಂದಿಗೆ ದಾಖಲಾತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನೋಡಿದರೆ ಗುರುತಿಸುತ್ತೇನೆ. ಫೆಡರಲ್ ಬ್ಯಾಂಕ್‌ಗೆ ಸೇರಿದಂತಹ ದಿನಾಂಕ 16-11-2023 ರ ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಸದರಿ ಚೆಕ್ಕಿಗೆ ಆರೋಪಿ ಸಹಿ ಹಾಕಿದ್ದು ಅದನ್ನು ನೋಡಿ ಗುರುತಿಸಿದ್ದಾರೆ. ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು. ಬ್ಯಾಂಕಿನವರು ಕೊಟ್ಟ ಹಿಂಬರವನ್ನು ನಿ.ಪಿ.2 ಎಂದು, ಆರೋಪಿಗೆ ಕೊಟ್ಟಂತಹ ಲೀಗಲ್ ನೋಟಿಸ್‌ನ ಕಚೇರಿ ಪ್ರತಿ ನಿ.ಪಿ.3 ಎಂದು, ಅಂಚೆ ರಶೀದಿಯನ್ನು ನಿ.ಪಿ.4 ಎಂದು, ಜಾರಿಯಾಗದೇ ಮರಳಿ ಬಂದಿರುವ ಅಂಚೆ ಲಕೋಟೆಯನ್ನು ನಿ.ಪಿ. 5 ಎಂದು, ಅಧಿಕಾರ ಪತ್ರವನ್ನು ನಿ.ಪಿ.6 ಎಂದು, ವ್ಯಾಪಾರಿ ಸಾಲದ ಅರ್ಜಿಯನ್ನು ನಿ.ಪಿ.7 ಎಂದು, ಶಿಫಾರಸ್ಸು ವರದಿಯನ್ನು ನಿ.ಪಿ. 8 ಎಂದು, ವ್ಯಾಪಾರ ಸಾಲ ಮಂಜೂರಿ ಪತ್ರವನ್ನು ನಿ.ಪಿ. 9 ಎಂದು, ಸಾಲದ ಕರಾರು ಪತ್ರವನ್ನು ನಿ.ಪಿ. 10 ಎಂದು, ಡಿಮಾಂಡ ಪ್ರಾಮಿಸರಿ ನೋಟ್‌ನ್ನು ನಿ.ಪಿ.11 ಎಂದು, ವಚನ ಪತ್ರವನ್ನು ನಿ.ಪಿ.12 ಎಂದು, ಆರೋಪಿಯ ಸಾಲದ ಖಾತೆಗೆ ಸಂಬಂಧಪಟ್ಟ ಸ್ಟೇಟಮೆಂಟ್‌ನ್ನು ನಿ.ಪಿ.13 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಆರೋಪಿ ಪರ ವಕೀಲರು ಹಾಜರಿದ್ದು ಪಾಟೀ ಸವಾಲಿಗೆ ಸಮಯ ಕೋರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ